# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 701 |
| ಸದಸ್ಯರ ಹೆಸರು | : | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 22-02-2023 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆಗಳು | ಉತ್ತರ |
|---|---|---|
| ಅ) | ಅನುದಾನದ ಕೊರತೆ, ಭೂಸ್ವಾಧೀನ ಸಮಸ್ಯೆ ಗುತ್ತಿಗೆದಾರರ ವಿಳಂಬ ದೋರಣೆ ಇತ್ಯಾದಿ ಕಾರಣಗಳಿಂದ ರಾಜ್ಯದಲ್ಲಿ ಅನುಷ್ಠಾನಗೊಳ್ಳುತ್ತಿರುವ ಹಲವಾರು ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳು ಮುಂದಗತಿಯಲ್ಲಿ ಸಾಗುತ್ತಿರುವುದು ಮತ್ತು ಕೆಲವೊಂದು ಹೆದ್ದಾರಿಗಳ ಕಾಮಗಾರಿಗಳು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಯಾವ ಹೆದ್ದಾರಿಗಳು ಇಂತಹ ಸ್ಥಿತಿಯಲ್ಲಿವೆ; (ವಿವರ ನೀಡುವುದು) | ಹೌದು,<br>ರಾಷ್ಟ್ರೀಯ ಹೆದ್ದಾರಿ ವಲಯ ಹಾಗೂ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ವತಿಯಿಂದ ಕೈಗೊಳ್ಳುತ್ತಿರುವ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳ ಪೈಕಿ ಕೆಲವೊಂದು ಕಾಮಗಾರಿಗಳು ಭೂಸ್ವಾಧೀನದ ಸಮಸ್ಯೆಯಿಂದಾಗಿ ಫಲಾನುಭವಿಗಳು ಕೋರುವ ಹೆಚ್ಚುವರಿ ಪರಿಹಾರ, ಕಾನೂನು ಸುವ್ಯವಸ್ಥೆ ಸಮಸ್ಯೆಗಳು, ಗದ್ದೆ ಪ್ರದೇಶ ಅನುಮತಿ/ಕೆರೆ ಪ್ರದೇಶ ಅನುಮತಿ, ಅಗತ್ಯ ಬ್ಲಾಸ್ಟಿಂಗ್ ಅನುಮತಿ, ಭಾರಿ ಮಳೆ ಮತ್ತು ಗುತ್ತಿಗೆದಾರರ ಆರ್ಥಿಕ ಮುಗ್ಗಟ್ಟುಗಳಿಂದಾದ ಅಡಚಣೆಯಿಂದ ಕಾಮಗಾರಿ ವಿಳಂಬವಾಗುತ್ತಿರುತ್ತವೆ.<br><br>ಇಂತಹ ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸಂಬಂಧಪಟ್ಟ ಜಿಲ್ಲಾಡಳಿತಗಳೊಂದಿಗೆ ನಡೆಸುವ ಸಭೆಗಳಲ್ಲಿ ಚರ್ಚಿಸಿ ಸಮಸ್ಯೆಗಳನ್ನು ಶೀಘ್ರಗತಿಯಲ್ಲಿಯೇ ಬಗೆಹರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಮುಂದುವರೆದು, ಗುತ್ತಿಗೆದಾರರಿಗೆ ಸಂಬಂಧಿಸಿದಂತೆ ಯಾವುದೇ ವಿಳಂಬವಾಗದಂತೆ ರಾಷ್ಟ್ರೀಯ ಹೆದ್ದಾರಿ ವಲಯ / ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ವತಿಯಿಂದ ಮೇಲ್ವಿಚಾರಣೆ ಮಾಡಲಾಗುವುದು ಮತ್ತು ಕಾಲಮಿತಿಯೊಳಗೆ ಯೋಜನೆಯನ್ನು ಪೂರ್ಣಗೊಳಿಸಲು ಸಂಬಂಧಪಟ್ಟವರಿಗೆ ಅಗತ್ಯ ನಿರ್ದೇಶನಗಳನ್ನು ನೀಡಲಾಗುತ್ತಿದೆ. |
| ಆ) | ಈ ಹೆದ್ದಾರಿ ಕಾಮಗಾರಿಗಳನ್ನು ನಿರ್ವಹಿಸುವಾಗ ರಸ್ತೆಗಳನ್ನು ನಿರ್ವಹಣೆ ಮಾಡದೇ ಇರುವುದರಿಂದ, ಕಾಮಗಾರಿಗಳು ನಡೆಯುವ ಸ್ಥಳದಲ್ಲಿ ಸೂಕ್ತ ತಡೆಗೋಡೆ ನಿರ್ಮಾಣ | ರಾಷ್ಟ್ರೀಯ ಹೆದ್ದಾರಿ ವಲಯ ಹಾಗೂ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ಕೈಗೊಳ್ಳುವ ಎಲ್ಲಾ ಕಾಮಗಾರಿಗಳನ್ನು IRC Specification and standards ಮತ್ತು ಕೇಂದ್ರ ಭೂ ಸಾರಿಗೆ ಮಂತ್ರಾಲಯದಿಂದ ಕಾಲಕಾಲಕ್ಕೆ ಹೊರಡಿಸುವ |

| | | |
|---|---|---|
| | ಮಾಡದೇ ಇರುವುದರಿಂದ ಮತ್ತು ರಸ್ತೆಗಳು ಗುಂಡಿ ಬಿದ್ದಿರುವ ಕಡೆ ಡಾಂಬರು ಹಾಕದೇ ಇರುವುದರಿಂದ ಪ್ರತಿನಿತ್ಯ ಅಪಘಾತಗಳು ಸಂಭವಿಸಿ ಸಾರ್ವಜನಿಕರಿಗೆ/ಪ್ರಯಾಣಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸುತ್ತೋಲೆಗಳನ್ವಯ ಕೈಗೊಳ್ಳಲಾಗುತ್ತಿದೆ ಹಾಗೂ ಕಾಮಗಾರಿ ಪ್ರಗತಿಯಲ್ಲಿರುವ ಸ್ಥಳಗಳಲ್ಲಿ ರಸ್ತೆ ಸುರಕ್ಷತೆ ಸಂಬಂಧಿಸಿದಂತೆ ತಡೆಗೋಡೆ ನಿರ್ಮಾಣ, Caution Boards, Sign Boards, Reflecting Tape, ಎಚ್ಚರಿಕೆ ಫಲಕಗಳು ಹಾಗೂ ಇತರೆ ಸುರಕ್ಷತಾ ಕ್ರಮಗಳನ್ನು ಅನುಸರಿಸಲಾಗುತ್ತಿದೆ. ಅಲ್ಲದೆ, ಹೆದ್ದಾರಿಗಳಲ್ಲಿನ ಗುಂಡಿ ಬಿದ್ದ ಸ್ಥಳಗಳಲ್ಲಿ ಕೂಡಲೇ ಗುಂಡಿಗಳನ್ನು ಮುಚ್ಚಿ ವಾಹನ ಸಂಚಾರಕ್ಕೆ ಯೋಗ್ಯವಾಗಿರಿಸಲಾಗುತ್ತಿದೆ. |
| ಇ) | ಬಂದಿದ್ದಲ್ಲಿ, ಸರ್ಕಾರದ ನಿಯಮಗಳು ಹಾಗೂ ಒಪ್ಪಂದ ಪತ್ರದಲ್ಲಿ ತಿಳಿಸಿರುವ ನಿಯಮಗಳನ್ನು ಪಾಲನೆ ಮಾಡದಿರುವ ಟೆಂಡರ್‌ದಾರರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಈ ಸಂಬಂಧ ಸಾರ್ವಜನಿಕರಿಂದ ಸ್ವೀಕೃತವಾಗಿರುವ ದೂರುಗಳೆಷ್ಟು? (ದಾಖಲೆಗಳೊಂದಿಗೆ ಪ್ರಕರಣವಾರು ವಿವರ ನೀಡುವುದು) | ರಾಷ್ಟ್ರೀಯ ಹೆದ್ದಾರಿ ವಲಯ ಹಾಗೂ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ಕೈಗೊಳ್ಳುತ್ತಿರುವ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಮೇಲೆ ತಿಳಿಸಿರುವಂತೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ. ಹಾಗೂ ಈ ಕುರಿತು ಯಾವುದೇ ದೂರುಗಳು ವರದಿಯಾಗಿರುವುದಿಲ್ಲ. |

ಕಡತ ಸಂಖ್ಯೆ: ಲೋಇ 64 ಸಿಎನ್‌ಹೆಚ್ 2023 (ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು